# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ. ನಾಗರಾಜು, ಇವರು ನೀಡಿರುವ ಶೂನ್ಯ ವೇಳೆ ಪ್ರಶ್ನೆಯ ಮೇಲಿನ ಹೇಳಿಕೆ

**ವಿಷಯ:** ಕೂಡ್ಲಿಗಿ ತಾಲ್ಲೂಕು ಬಡೇಲಡಕು ಗ್ರಾಮ ಪಂಚಾಯತಿ ವ್ಯಾಪ್ತಿಯ ದೊಡ್ಡ ಗೊಲ್ಲರಹಟ್ಟಿ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಕಾಮಗಾರಿ ಯೋಜನೆಯಡಿ ಅವೈಜ್ಞಾನಿಕ ಕಾಮಗಾರಿ ನಡೆಸಿದ್ದು, ಕಲುಷಿತ ನೀರನ್ನು ಸೇವಿಸಿ ಗ್ರಾಮದ 13 ಜನರು ಅಸ್ವಸ್ಥಗೊಂಡಿದ್ದು, ಅವೈಜ್ಞಾನಿಕ ಕಾಮಗಾರಿ ಕೈಗೊಂಡಿರುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ.

****

**ಹೇಳಿಕೆ:** ವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲ್ಲೂಕಿನ ಬಡೇಲಡಕು ಗ್ರಾಮ ಪಂಚಾಯತಿ ವ್ಯಾಪ್ತಿಯ ದೊಡ್ಡಗೊಲ್ಲರಹಟ್ಟಿ ಗ್ರಾಮದಲ್ಲಿ ದಿನಾಂಕ:01.07.2023ರ ಶನಿವಾರರಂದು ವಾಂತಿ ಬೇಧಿ ಪ್ರಕರಣಗಳು ವರದಿಯಾಗಿದ್ದು, ವಾಂತಿ ಬೇಧಿಯಿಂದ ಬಾಧಿತರಾಗಿದ್ದವರನ್ನು ಸರ್ಕಾರಿ ಆಸ್ಪತ್ರೆ ಕೂಡ್ಲಿಗಿಯಲ್ಲಿ ದಾಖಲಿಸಲಾಗಿರುತ್ತದೆ. ಇಲ್ಲಿಯ ತನಕ ಒಟ್ಟು 14 ಜನರು ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಕೂಡ್ಲಿಗಿಯಲ್ಲಿ ದಾಖಲಾಗಿದ್ದು, ಎಲ್ಲಾ 14 ಜನರು ಆರೋಗ್ಯವಾಗಿದ್ದು, ಆರೋಗ್ಯ ಸ್ಥಿತಿ ಸಾಮಾನ್ಯವಾಗಿರುತ್ತದೆ. ದಿನಾಂಕ:02.07.2023 ರಂದು ಎಲ್ಲಾ ಜಲಮೂಲಗಳಿಂದ ಸರಬರಾಜಾಗುವ ನೀರಿನ ಮೂಲಗಳನ್ನು ಬಂದ್ ಮಾಡಿ ನಿರಂತರವಾಗಿ ಟ್ಯಾಂಕರ್ ಮೂಲಕ ನೀರನ್ನು ಒದಗಿಸಲಾಗುತ್ತಿದೆ.

ಗೊಲ್ಲರಹಟ್ಟಿ ಗ್ರಾಮದಲ್ಲಿ 3 ಕೊಳವೆಬಾವಿಗಳಿದ್ದು, 3 ಕೊಳವೆಬಾವಿಗಳ ರೈಸಿಂಗ್ ಮೇನ್ ಹಲವು ಕಡೆ ದುರಸ್ಥಿಗೊಳಪಟ್ಟಿದ್ದು. ದುರಸ್ಥಿಗಳನ್ನು ಕಾಲ ಕಾಲಕ್ಕೆ ಸರಿಪಡಿಸದೇ ಇರುವುದರಿಂದ ಹಾಗೂ ಇತ್ತೀಚೆಗೆ ಆದ ಮಳೆಯಿಂದಾಗಿ ನೀರು ಸೋರಿಕೆಯಾಗಿ ಕಲುಷಿತಗೊಂಡಿದ್ದು, ಬ್ಯಾಕ್ಟೀರಿಯಾಗಳಿಂದ ನೀರು ಕಲುಷಿತಗೊಂಡಿರುತ್ತದೆ.

ಗ್ರಾಮದಲ್ಲಿ ಈಗಾಗಲೇ ಎಲ್ಲಾ ರೈಸಿಂಗ್ ಮೇನ್ ಗಳಿಗೆ ಮಾರ್ಗ ಬದಲಾಯಿಸಲಾಗಿದ್ದು, ಗ್ರಾಮಸ್ಥರು ಮಲ ಮತ್ತು ಮೂತ್ರ ವಿಸರ್ಜನೆಯನ್ನು ಗ್ರಾಮದ ಒಳಗೆ ಮಾಡುತ್ತಿದ್ದು, ಅಂತಹ ಸ್ಥಳದಿಂದಲೂ ಸಹ ನೀರು ಕಲುಷಿತಗೊಂಡಿರುವುದು ಪರೀಕ್ಷಾ ವರದಿಯಲ್ಲಿ ಕಂಡುಬಂದಿರುತ್ತದೆ

ಕೊಳವೆಬಾವಿಗಳ ಕೇಸಿಂಗ್ ಪೈಪ್ ಅನ್ನು ಎತ್ತರಿಸಿ ಮಳೆ ನೀರು ಒಳ ಹೋಗದಂತೆ ಕ್ರಮ ವಹಿಸಲಾದಿದ್ದು ಎಲ್ಲಾ ರೈಸಿಂಗ್ ಮೇನ್ ಗಳ ಮಾರ್ಗಗಳನ್ನು ಹಳ್ಳಗಳ ಮತ್ತು ಹೊಂಡಗಳ ಮೂಲಕ ಹಾದು ಹೋಗದಂತೆ ಬದಲಾಯಿಸಲಾಗಿರುತ್ತದೆ. ಪ್ರಸ್ತುತ RO ಘಟಕದ ನೀರನ್ನು ಕುಡಿಯಲು ಬಳಸಲಾಗುತ್ತಿದ್ದು, ಈಗಿನ ಪರಿಸ್ಥಿತಿಯಲ್ಲಿ ಟ್ಯಾಂಕರ್ ಬಳಸಿ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, OHT ಯನ್ನು ಸ್ವಚ್ಛಗೊಳಿಸಿ ಕ್ಲೋರಿನೇಷನ್ ಕೈಗೊಂಡು ಮತ್ತೊಮ್ಮೆ ನೀರಿನ ಗುಣಮಟ್ಟದ ಪರೀಕ್ಷೆಯನ್ನು ನಡೆಸಿ, ಗುಣಮಟ್ಟವನ್ನು ಖಚಿತಪಡಿಸಿಕೊಂಡ ನಂತರ ಸದರಿ OHT ಯಿಂದ ನೀರನ್ನು ಸರಬರಾಜು ಮಾಡಲು ಕ್ರಮ ವಹಿಸಲಾಗುವುದು.

ಈ ಘಟನೆ ಬಗ್ಗೆ ತನಿಖೆ ನಡೆಸಿ, ಒಂದು ವೇಳೆ ಕಲುಷಿತ ನೀರಿನಿಂದ ಈ ಪ್ರಕರಣವು ಸಂಭವಿಸಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ /ಕಂಟ್ರಾಕ್ಟರ್ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಭೇಟಿ ನೀಡಿ ಬಾಧಿತರ ಮನೆ-ಮನೆಗೆ ಭೇಟಿ ನೀಡಿರುತ್ತಾರೆ. ಈ ಗ್ರಾಮದಲ್ಲಿ 210 ಮನೆಗಳಿದ್ದು, 1375 ಜನಸಂಖ್ಯೆಯಿರುತ್ತದೆ. ಕುಡಿಯುವ ನೀರಿನ ಬಗ್ಗೆ ವ್ಯಾಪಕ ಜಾಗೃತಿಯನ್ನು ಮೂಡಿಸಲಾಗಿರುತ್ತದೆ. ಸ್ಥಳೀಯ ಸರ್ಕಾರಿ ಶಾಲೆ ಕೊಠಡಿಯಲ್ಲಿ ದಿನಾಂಕ:01.07.2023 ರಿಂದ ತಾತ್ಕಾಲಿಕ ಚಿಕಿತ್ಸಾಲಯವನ್ನು ತೆರೆಯಲಾಗಿದ್ದು, ವೈದ್ಯಾಧಿಕಾರಿ ಹಾಗೂ ಆರೋಗ್ಯ ಸಿಬ್ಬಂದಿಯಿಂದ ತೀವ್ರ ನಿಗಾ ಇಡಲಾಗುತ್ತಿದೆ. ಆಶಾ ಕಾರ್ಯಕರ್ತೆಯರಿಂದ ಹಾಗೂ ಆರೋಗ್ಯ ಸಿಬ್ಬಂದಿಯವರಿಂದ ಮನೆ-ಮನೆಗೆ ಭೇಟಿ ನೀಡಿ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ. ಹಾಗೂ ಸದರಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವಿದ್ದರೂ ಕೂಡಾ ಗ್ರಾಮಸ್ಥರು RO ನೀರನ್ನು ಬಳಸುತ್ತಿಲ್ಲ. ಈ ಸಂಬಂಧವಾಗಿ ಸಾರ್ವಜನಿಕರಲ್ಲಿ / ಗ್ರಾಮಸ್ಥರಲ್ಲಿ RO ಪ್ಲಾಂಟ್ ನೀರನ್ನು ಕುಡಿಯಲು ಬಳಸುವಂತೆ ಹಾಗೂ ನೀರನ್ನು ಕುದಿಸಿ ಬಳಸುವಂತೆ ಜಾಗೃತಿಯನ್ನು ಮೂಡಿಸಲಾಗಿರುತ್ತದೆ. ಎಲ್ಲಾ ಜಲ ಮೂಲಗಳ ಸ್ಯಾಂಪಲ್ ಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ. ಸರ್ಕಾರಿ ಆಸ್ಪತ್ರೆಗೆ ಮಾನ್ಯ ಶಾಸಕರು ಭೇಟಿ ನೀಡಿ ಆರೋಗ್ಯ ವಿಚಾರಿಸಿರುತ್ತಾರೆ ಹಾಗೂ ತಾಲ್ಲೂಕು ಆಸ್ಪತ್ರೆ ಕೂಡ್ಲಿಗಿ ವೈದ್ಯಾಧಿಕಾರಿಗಳಿಗೆ ಸೂಚನೆಗಳನ್ನು ನೀಡಿರುತ್ತಾರೆ. ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರಿ ಆಸ್ಪತ್ರೆ ಕೂಡ್ಲಿಗಿಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದು, ಒಳರೋಗಿಗಳ ಆರೋಗ್ಯ ಸ್ಥಿತಿ ಸಾಮಾನ್ಯವಾಗಿದೆ. ಗ್ರಾಮದಲ್ಲಿನ ನೀರು ಮತ್ತು ನೈರ್ಮಲ್ಯ ಸ್ಥಿತಿಯ ಬಗ್ಗೆ ನಿರಂತರವಾಗಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಅಗತ್ಯ ಕ್ರಮ ವಹಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ.

ಸದರಿ ಗ್ರಾಮದಲ್ಲಿ ಕಲುಷಿತ ನೀರಿನಿಂದ ಈ ಘಟನೆ ಸಂಭವಿಸಿದ್ದಲ್ಲಿ ತನಿಖೆ ಕೈಗೊಂಡು ಸಂಬಂಧಪಟ್ಟ ಅಧಿಕಾರಿಯ ವಿರುದ್ಧ / ಕಂಟ್ರಾಕ್ಟರ್ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಗ್ರಾಮದ ನೀರು ಮತ್ತು ನೈರ್ಮಲ್ಯ ಸಮಿತಿ ಹಾಗೂ ಸ್ವ-ಸಹಾಯ ಸಂಘಗಳ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಬರುವ ನೀರಿನ ಮೂಲಗಳ ಗುಣಮಟ್ಟದ ಪರೀಕ್ಷೆಯನ್ನು Field Test Kit (FTK) & Bacteriological vials ಗಳನ್ನು ಉಪಯೋಗಿಸಿ ಕೈಗೊಳ್ಳುವ ಕುರಿತು ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮತ್ತು ಏಕಗ್ರಾಮ ಕುಡಿಯುವ ನೀರಿನ ಯೋಜನೆಗಳಿಂದ ಸರಬರಾಜು ಮಾಡುವ ಕುಡಿಯುವ ನೀರಿನ ಗುಣಮಟ್ಟದ ಪರೀಕ್ಷೆಗಳನ್ನು ಕೈಗೊಳ್ಳುವ ಕುರಿತು ಪ್ರಮಾಣಿತ ಕಾರ್ಯಾಚರಣೆಯ ವಿಧಾನಗಳನ್ನು Standard Operating Procedures (SOP) ಪತ್ರ ಸಂಖ್ಯೆ:RDWSD/09/WQMSP/2022 ದಿನಾಂಕ:31.10.2022ರಂದು ನೀಡಲಾಗಿರುತ್ತದೆ. ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಮುನ್ನ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ವಿವರವಾದ ಪತ್ರವನ್ನು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ:14.06.2022ರಂದು ಕಳುಹಿಸಲಾಗಿರುತ್ತದೆ.

ಕಲುಷಿತ ನೀರು ಸರಬರಾಜಿನಿಂದ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ವಾಸಿಸುವ ಜನರ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮಗಳನ್ನು ತಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಮತ್ತು ಇಂತಹ ಪ್ರಕರಣಗಳು ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಜವಾಬ್ದಾರಿಯನ್ನಾಗಿ ಮಾಡಲು, ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:12.06.2023ರ ಸಭೆಯ ಆದೇಶದಂತೆ, ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಿಂದ ದಿನಾಂಕ:15.06.2023ರಂದು ವಿವರವಾದ "ಅರೆ ಸರ್ಕಾರಿ" ಪತ್ರವನ್ನು ಕಳುಹಿಸಲಾಗಿರುತ್ತದೆ.

ಮುಂದುವರೆದು, ಇಂತಹ ಪ್ರಕಣಗಳನ್ನು ತಡೆಯುವ ನಿಟ್ಟಿನಲ್ಲಿ ತಾಲ್ಲೂಕುವಾರು ಕಾರ್ಯಪಡೆಗಳನ್ನು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳನ್ನು ಒಳಗೊಂಡಂತೆ ತಂಡವನ್ನು ರಚಿಸಲು ನಿರ್ದೇಶನ ನೀಡಲಾಗಿದ್ದು, ಎಲ್ಲಾ ಕುಡಿಯುವ ನೀರಿನ ಮೂಲಗಳ ಸುತ್ತಲೂ ಯಾವುದೇ ಕೊಳಚೆ ನೀರು ನಿಲ್ಲದಂತೆ ಮತ್ತು ನೀರು ಸರಾಗವಾಗಿ ಹರಿಯುವಂತೆ ಪ್ಲಾಟ್‌ಫಾರಂ ಮತ್ತು ಸುತ್ತಲೂ ಕಟ್ಟೆಯನ್ನು ಕಟ್ಟುವಂತೆ ಕೂಡಲೇ ಕ್ರಮ ಕೈಗೊಳ್ಳಲು ತಿಳಿಸಲಾಗಿದ್ದು, ಈಗಾಗಲೇ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿರುವ Overhead tanks, cistern ಗಳನ್ನು ಸಾಮೂಹಿಕವಾಗಿ ಸ್ವಚ್ಛಗೊಳಿಸುವ ಮತ್ತು ಕ್ಲೋರಿನೇಷನ್ ಅನ್ನು ಕೈಗೊಳ್ಳುವ ಸಪ್ತಾಹಗಳನ್ನು ಕೆಲವು ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಉಳಿದ ಜಿಲ್ಲೆಗಳಲ್ಲೂ ಸಹಾ ಸಪ್ತಾಹಗಳನ್ನು ಹಮ್ಮಿಕೊಳ್ಳುವಂತೆ ಹಾಗೂ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿರುತ್ತದೆ.

ಸಂ:ಗ್ರಾಕುನೀ&ನೈ/28/ಅಧೀಕ್ಷಕರು-01/2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಸಚಿವರು